# ದರ್ಪಣ

**ಜೊಲ್ಲೆ ಉದ್ಯೋಗ ಸಮೂಹ**

**ವಾರ್ತಾ ಪತ್ರ**

(ಖಾಸಗಿ ಸುತ್ತೋಲೆ ಸಲುವಾಗಿ ಮಾತ್ರ)


ಅಗಸ್ಟ 2022–ಸಂಪುಟ–6 ಸಂಚಿಕೆ–09




ಭಿವಶಿಯ ನಿವಾಸಕ್ಕೆ ಆಗಮಿಸಿದ ಗೃಹ ಸಚಿವರಾದ ಶ್ರೀ. ಆರಗ ಜ್ಞಾನೇಂದ್ರ ಅವರನ್ನು ಮುಜರಾಯಿ, ಹಜ ಮತ್ತು ವಕ್ಫ್ ಇಲಾಖೆಯ ಸಚಿವರಾದ ಸೌ. ಶಶಿಕಲಾ ಜೊಲ್ಲೆ ಹಾಗೂ ಚಿಕ್ಕೋಡಿ ಲೋಕಸಭೆ ಸಂಸದರಾದ ಶ್ರೀ. ಅಣ್ಣಾಸಾಹೇಬ ಜೊಲ್ಲೆಯವರು ಆತ್ಮೀಯವಾಗಿ ಬರಮಾಡಿಕೊಂಡು ಸತ್ಕರಿಸುತ್ತಿರುವುದು.

**ಶ್ರೀ ಬೀರೇಶ್ವರ ಕೋ-ಆಪ್. ಕ್ರೆಡಿಟ್ ಸೊಸಾಯಟಿ ಲಿ., ಯಕ್ಸಂಬಾ (ಮಲ್ಟಿ-ಸ್ಟೇಟ)**

ಕ್ರೀಯಾತ್ಮಕ ಹಾಗೂ ಪ್ರಗತಿಶೀಲ ಅರ್ಥವ್ಯವಸ್ಥೆ




## ಶಿವಶಂಕರ ಜೊಲ್ಲೆ ಕನ್ನಡ ಪ್ರಾಥಮಿಕ ಹಾಗೂ ಪ್ರೌಡ ಶಾಲೆಯ 2022-23 ನೇ ಸಾಲಿನ ಸಾಂಸ್ಕೃತಿಕ, ಕ್ರೀಡಾ ಹಾಗೂ ವಿದ್ಯಾರ್ಥಿ ಸಂಘದ ಉದ್ಘಾಟನೆ

ಶಿವಶಂಕರ ಜೊಲ್ಲೆ ಕನ್ನಡ ಪ್ರಾಥಮಿಕ ಹಾಗೂ ಪ್ರೌಢ ಶಾಲೆ, ಯಕ್ಸಂಬಾ 2022–23ನೇ ಸಾಲಿನ ಸಾಂಸ್ಕೃತಿಕ, ಕ್ರೀಡಾ ಹಾಗೂ ವಿದ್ಯಾರ್ಥಿ ಸಂಘದ ಉದ್ಘಾಟನಾ ಸಮಾರಂಭ ಜೊಲ್ಲೆ ಎಜ್ಯುಕೇಶನ ಸೊಸಾಯಟಿಯ ಅಂಗ ಸಂಸ್ಥೆಯಾದ ಶಿವಶಂಕರ ಜೊಲ್ಲೆ ಕನ್ನಡ ಪ್ರಾಥಮಿಕ ಹಾಗೂ ಪ್ರೌಢ ಶಾಲೆಯಲ್ಲಿ ದಿನಾಂಕ 12–07–2022 ರಂದು ಸಾಂಸ್ಕೃತಿಕ, ಕ್ರೀಡಾ ಹಾಗೂ ವಿದ್ಯಾರ್ಥಿ ಸಂಘದ ಉದ್ಘಾಟನಾ ಸಮಾರಂಭವನ್ನು ಹಮ್ಮಿಕೊಂಡಿದ್ದು, ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಆಶಾಜ್ಯೋತಿ ವಿಶೇಷ ಮಕ್ಕಳ ವಸತಿ ಶಾಲೆಯ ಅಧ್ಯಕ್ಷರಾದ ಶ್ರೀ. ಜ್ಯೋತಿಪ್ರಸಾದ ಜೊಲ್ಲೆಯವರು ವಹಿಸಿದ್ದರು.

ಬಸವಜ್ಯೋತಿ ಯೂಥ್ ಫೌಂಡೇಶನ ಅಧ್ಯಕ್ಷರು ಹಾಗೂ ಮ್ಯಾಗ್ನಂಮ್‌ಟಪ್ ಇಂಡಿಯಾ ಪ್ರಾವೆಟ್ ಲಿಮಿಟೆಡ್‌ನ ಮ್ಯಾನೆಜಿಂಗ ಡೈರೆಕ್ಟರ್ ಆದ ಕು. ಬಸವಪ್ರಸಾದ ಜೊಲ್ಲೆ ಹಾಗೂ ಮುಖ್ಯ ಅಥಿತಿಗಳಾಗಿ ಆಗಮಿಸಿ ಶ್ರೀ. ಎ ಸಿ ಗಂಗಾಧರ ಶಿಕ್ಷಣಾಧಿಕಾರಿಗಳು, ಉಪನಿರ್ದೇಶಕರ ಕಾರ್ಯಾಲಯ ಚಿಕ್ಕೋಡಿ ಇವರು ದೀಪ ಪ್ರಜ್ವಲನೆ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿ, "ಪ್ರತಿಯೊಬ್ಬ ವ್ಯಕ್ತಿಯು ಜೀವನದಲ್ಲಿ ಯಶಸ್ವಿಯಾಗಬೇಕಾದರೆ ಕಠಿಣ ಪರಿಶ್ರಮ ಹಾಗೂ ಪ್ರಾಮಾಣಿಕತೆಯಿಂದ ಕಾರ್ಯವನ್ನು ಮಾಡಬೇಕಾಗುತ್ತದೆ. ವಿದ್ಯಾರ್ಥಿಜೀವನದಲ್ಲಿ ತಾವುಗಳು ಕಷ್ಟಪಟ್ಟು ಓದದೇ ಇಷ್ಟಪಟ್ಟು ಪ್ರಾಮಾಣಿಕತೆಯಿಂದ ಅಧ್ಯಯನದಲ್ಲಿ ತೊಡಗಿ ಜೀವನದಲ್ಲಿ ಯಶಸ್ವಿ ವ್ಯಕ್ತಿಯಾಗಿ ಹೊರಹೊಮ್ಮಬೇಕೆಂದು ತಿಳಿಸಿದರು".

ಕು. ಬಸವಪ್ರಸಾದ ಜೊಲ್ಲೆಯವರು ಮಾತನಾಡಿ "ನಮ್ಮ ಸಂಸ್ಥೆಯು ಗ್ರಾಮೀಣ ಮಟ್ಟದಲ್ಲಿ ಸ್ಥಾಪನೆಗೊಂಡು ವಿದ್ಯಾರ್ಥಿಗಳಿಗೆ ಬೇಕಾದ ಎಲ್ಲ ಮೂಲ ಸೌಕರ್ಯಗಳೊಂದಿಗೆ ಕಲಿಕೆಗೆ ಬೇಕಾದ ವಾತಾವರಣವನ್ನು ನಿರ್ಮಿಸಿದ್ದು ಇದರ ಪ್ರತಿಫಲವಾಗಿ ಎಸ್.ಎಸ್.ಎಲ್.ಸಿ ಫಲಿತಾಂಶವು ಅತ್ಯುತ್ತಮವಾಗುದರೊಂದಿಗೆ ರಾಜ್ಯಕ್ಕೆ ದ್ವಿತೀಯ ಸ್ಥಾನವನ್ನು ಪಡೆದಿರುವುದು ಸಂತಸವನ್ನುಂಟುಮಾಡಿದೆ ಎಂದು ಮಾರ್ಮಿಕವಾಗಿ ನುಡಿದರು".

ಜೊಲ್ಲೆ ಉದ್ಯೋಗ ಸಮೂಹದ ಇವೆಂಟ್ ಮ್ಯಾನೆಜಮೆಂಟ್‌ನ ನಿರ್ದೇಶಕರಾದ ಶ್ರೀ ವಿಜಯ ರಾವುತ ಮಾತನಾಡಿ "ಎಲ್ಲ ವಿದ್ಯಾರ್ಥಿಗಳು ಶಾಲಾ ಚಟುವಟಿಕೆಗಳೊಂದಿಗೆ ಅಂತರ್ ಶಾಲಾ ಸ್ಪರ್ಧೆಗಳಲ್ಲಿ ಭಾಗವಹಿಸಿ ಜಿಲ್ಲೆ, ರಾಜ್ಯ ಮಟ್ಟದವರೆಗೆ ಹೆಸರನ್ನು ಗುರುತಿಸುವಂತಾಗಬೇಕೆಂದು ಹೇಳಿದರು".

ಇದೇ ಸಂದರ್ಭದಲ್ಲಿ ಶಾಲಾ ಮಕ್ಕಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿ, ವಿದ್ಯಾರ್ಥಿಗಳಿಗೆ ಜವಾಬ್ದಾರಿ ಹಂಚಿಕೆಯನ್ನು ಮಾಡಲಾಯಿತು. ಶಾಲೆಯ ಆಡಳಿತ ಮಂಡಳಿಯ ಸದಸ್ಯರುಗಳಾದ ಶ್ರೀಮತಿ ಫೇಮಿದಾ ದಾಡಿವಾಲೆ, ಶ್ರೀಮತಿ ಸುಜಾತಾ ಕಬಾಡೆ, ಶ್ರೀಮತಿ ಲತಾ ವಾಳಕೆ, ಶಾಲೆಯ ಮುಖ್ಯೋಪಾಧ್ಯಾಯರಾದ ಶ್ರೀ. ವ್ಹಿ. ಆರ್. ಭಿವಸೆ, ಸೌ. ಎಸ್ ಜಿ ಕಾಮತ್, ಎಲ್ಲ ಶಿಕ್ಷಕ ವೃಂದದವರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಮುಖ್ಯೋಪಾಧ್ಯಾಯರಾದ ಶ್ರೀ. ವ್ಹಿ. ಆರ್. ಭಿವಸೆರವರು ಎಲ್ಲರನ್ನು ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕು. ಸೂರಜ ನಿಡಗುಂದೆ ವಂದಿಸಿ, ಕು. ಮಂಜುಳಾ ಕಾಂಡಗಾವೆ ನಿರೂಪಿಸಿದರು.





# ಕಾರ್ಗಿಲ್ ವಿಜಯ್ ದಿವಸ್ 2022

## ಈ ದಿನದ ಇತಿಹಾಸ, ಮಹತ್ವ ಮತ್ತು ವಿಶೇಷತೆ ತಿಳಿಯಿರಿ



ಭಾರತೀಯರ ಪಾಲಿಗೆ ಜುಲೈ 26 ಎನ್ನುವುದು ಕೇವಲ ಒಂದು ದಿನವಲ್ಲ. ದೇಶದ ಗಡಿ ನುಗ್ಗಲು ಯತ್ನಿಸಿದ ಪರಕೀಯರಿಗೆ ಪಾಠ ಕಲಿಸಿದ ದಿನ. ರಾಷ್ಟ್ರಕ್ಕಾಗಿ ಪ್ರಾಣತ್ಯಾಗ ಮಾಡಿದ ವೀರ ಯೋಧರನ್ನು ಗೌರವಿಸುವ ವಿಶೇಷ ಹಬ್ಬವಿದೆ. ಇಂಥದೊಂದು ಹಬ್ಬಕ್ಕೆ ನಾವು ಇಟ್ಟುಕೊಂಡಿರುವ ಹೆಸರೇ ಕಾರ್ಗಿಲ್ ವಿಜಯ್ ದಿವಸ್.

ಅದು 1999ರ ಜುಲೈ 26ರ ದಿನ. ಪಾಕಿಸ್ತಾನದ ವಿರುದ್ಧ ಭಾರತವು ದಿಗ್ವಿಜಯದ ಧ್ವಜವನ್ನು ಎತ್ತಿ ಹಿಡಿದ ದಿನ. ಹೀಗಾಗಿ ಈ ದಿನವನ್ನು ಪ್ರತಿವರ್ಷ ಕಾರ್ಗಿಲ್ ವಿಜಯ್ ದಿವಸ್ ಎಂದು ಆಚರಿಸಲಾಗುತ್ತದೆ. ಕಾರ್ಗಿಲ್‌ನಲ್ಲಿ 60 ದಿನಗಳ ಕಾಲ ನಡೆದ ಸಂಘರ್ಷದಲ್ಲಿ ಪಾಕಿಸ್ತಾನದ ಸೇನೆಯನ್ನು ಭಾರತೀಯ ಯೋಧರು ಹಿಮ್ಮೆಟ್ಟಿಸಿದರು.

ಆಪರೇಷನ್ ವಿಜಯ್ ಭಾಗವಾಗಿ ಟೈಗರ್ ಹಿಲ್ ಮತ್ತು ಇತರೆ ಪೋಸ್ಟ್‌ಗಳನ್ನು ವಶಪಡಿಸಿಕೊಳ್ಳಲಾಯಿತು. ಈ ಯುದ್ಧದಲ್ಲಿ ಹುತಾತ್ಮರಾದ ನೂರಾರು ಭಾರತೀಯ ಯೋಧರಿಗೆ ಗೌರವ ಸಲ್ಲಿಸುವ ಉದ್ದೇಶದಿಂದಲೇ ಈ ದಿನವನ್ನು ಆಚರಿಸಲಾಗುತ್ತದೆ. ಕಾರ್ಗಿಲ್ ವಿಜಯ್ ದಿವಸ್ ಕುರಿತಾದ ಇತಿಹಾಸ, ಮಹತ್ವ ಮತ್ತು ವಿಶೇಷತೆಯನ್ನು ತಿಳಿದುಕೊಳ್ಳೋಣ.

### ಕಾರ್ಗಿಲ್ ವಿಜಯ್ ದಿವಸ್ ಇತಿಹಾಸ ತಿಳಿಯಿರಿ

1971ರ ಇಂಡೋ-ಪಾಕ್ ಯುದ್ಧದ ನಂತರದಲ್ಲಿ ಹಲವಾರು ಸಶಸ್ತ್ರ ಒಪ್ಪಂದಗಳನ್ನು ಮಾಡಿಕೊಳ್ಳಲಾಯಿತು. ಇದರ ಮಧ್ಯೆ 1998ರಲ್ಲಿ ಉಭಯ ರಾಷ್ಟ್ರಗಳು ಪರಮಾಣು ಪರೀಕ್ಷೆ ನಡೆಸಿದವು. ಕಾಶ್ಮೀರ ಸಮಸ್ಯೆಯನ್ನು ಶಾಂತಿಯುತವಾಗಿ ಇತ್ಯರ್ಥಗೊಳಿಸಿಕೊಳ್ಳುವ ಸಂಬಂಧ 1999ರಲ್ಲಿ ಲಾಹೋರ್ ಒಪ್ಪಂದಕ್ಕೆ ಎರಡೂ ರಾಷ್ಟ್ರಗಳು ಅಂಕಿತ ಹಾಕಿದವು. ಇದರ ಮಧ್ಯೆ 'ಆಪರೇಷನ್ ಬದ್ರ' ಹೆಸರಿನಲ್ಲಿ ಪಾಕಿಸ್ತಾನವು ಗಡಿ ನಿಯಂತ್ರಣ ರೇಖೆಯುದ್ದಕ್ಕೂ ಭಾರತದ ಭೂಪ್ರದೇಶದ ಒಳನುಸುಳುವಿಕೆಯನ್ನು ಶುರು ಮಾಡಿತು. ಇದು ಕಾಶ್ಮೀರ ಮತ್ತು ಲಡಾಖ್ ನಡುವಿನ ಸಂಪರ್ಕ ಕಡಿತದ ಗುರಿಯನ್ನು ಹೊಂದಿತ್ತು. ಈ ಯುದ್ಧವು ಕಾಶ್ಮೀರ ವಿವಾದ ಇತ್ಯರ್ಥಕ್ಕಾಗಿ ಭಾರತವನ್ನು ಒತ್ತಾಯಿಸಿತು.

1999ರ ಮೇ ಮತ್ತು ಜುಲೈ ತಿಂಗಳಿನಲ್ಲಿ ಕಾರ್ಗಿಲ್ ಜಿಲ್ಲೆಯಲ್ಲಿ ಭಾರತ ಮತ್ತು ಪಾಕಿಸ್ತಾನದ ನಡುವೆ ಯುದ್ಧ ನಡೆಯಿತು. ಈ ಯುದ್ಧದ ಹಿಂದೆ ಪಾಕಿಸ್ತಾನದ ಸೇನಾ ಮುಖ್ಯಸ್ಥ ಪರ್ವೇಜ್ ಮುಷರಫ್ ಇದ್ದರು ಎಂದು ಹೇಳಲಾಗುತ್ತದೆ. ಪ್ರಾಥಮಿಕ ಹಂತದಲ್ಲಿ ಭಾರತದ ನಿಯಂತ್ರಣದಲ್ಲಿದ್ದ ವಿವಿಧ ಆಯಕಟ್ಟಿನ ಸ್ಥಳಗಳಲ್ಲಿ ತಮ್ಮ ಸೇನೆಯನ್ನು ನಿಯೋಜಿಸುವ ಮೂಲಕ ಪಾಕಿಸ್ತಾನವು ಆ ಪ್ರದೇಶಗಳನ್ನು ವಶಕ್ಕೆ ಪಡೆದುಕೊಂಡಿತ್ತು. ಎರಡನೇ ಹಂತದಲ್ಲಿ ಯುದ್ಧತಂತ್ರದ ಮೂಲಕ ಭಾರತವು ತಕ್ಕ ತಿರುಗೇಟು ನೀಡಿತು. ಅಂತಿಮವಾಗಿ ವಾಯುಪಡೆಯ ಸಹಾಯದಿಂದ ಭಾರತೀಯ ಸೇನೆಯು ಯುದ್ಧವನ್ನು ಮುಕ್ತಾಯಗೊಳಿಸಿತು.

### ಭಾರತದ ಬೆನ್ನಿಗೆ ಚೂರಿ ಹಾಕಿದ ಪಾಕಿಸ್ತಾನದ ಹುನ್ನಾರ

ಕಳೆದ 1999ರ ಫೆಬ್ರವರಿಯಲ್ಲಿ ಭಾರತದ ಅಂದಿನ ಪ್ರಧಾನಮಂತ್ರಿ ಅಟಲ್ ಬಿಹಾರಿ ವಾಜಪೇಯಿ, ಭಾರತ-ಪಾಕಿಸ್ತಾನ "ಭಾಯಿ ಭಾಯಿ" ಎಂಬ ಕಲ್ಪನೆಯಲ್ಲಿ ಭಾರತದಿಂದ ಲಾಹೋರಿಗೆ ಐತಿಹಾಸಿಕ ಬಸ್ ಸೇವೆ ಆರಂಭಿಸಿದರು. 1999ರ ಫೆಬ್ರವರಿ 21ರಂದು ಬಸ್ ಪ್ರಾರಂಭಿಸಿ, ಲಾಹೋರ್ ಒಪ್ಪಂದಕ್ಕೆ ಸಹಿ ಹಾಕುವುದರೊಂದಿಗೆ ಸ್ನೇಹದ ಹಸ್ತ ಚಾಚುವ ಹೃದಯ ವೈಶಾಲ್ಯತೆ ತೋರಿದ್ದರು.

ಒಂದು ಕಡೆ ಸ್ನೇಹ ಹಸ್ತಕ್ಕೆ ಕೈಕುಲುಕಿದ್ದ ಪಾಕಿಸ್ತಾನ, ಇನ್ನೊಂದು ಮಗ್ಗಲಿನಲ್ಲಿ ಭಾರತದ ಬೆನ್ನಿಗೆ ಚೂರಿ ಹಾಕುವ ಹುನ್ನಾರ ನಡೆಸಿತ್ತು. ಶ್ರೀನಗರದಿಂದ ಲೇಹ್ ಸಂಪರ್ಕಿಸುವ ಏಕೈಕ ರಸ್ತೆ ಮಾರ್ಗ ಅಂದರೆ ರಾಷ್ಟ್ರೀಯ ಹೆದ್ದಾರಿ 1ಡಿ. ಈ ಹೆದ್ದಾರಿ ಜೋಜಿ ಲಾ ಪಾಸ್ ಮತ್ತು ಕಾರ್ಗಿಲ್ ಎಂಬ ಪ್ರದೇಶಗಳ ಮೂಲಕ ಹಾದು ಹೋಗುತ್ತದೆ. ಈ ಕಾರ್ಗಿಲ್ ಪ್ರದೇಶವನ್ನು ವಶಪಡಿಸಿಕೊಳ್ಳುವ ಮೂಲಕ ಕಾಶ್ಮೀರದಿಂದ ಲಡಾಕ್ ಭಾಗವನ್ನು ಬೇರ್ಪಡಿಸಿ ಸಿಯಾಚಿನ್ ಪ್ರದೇಶವನ್ನು ಕಬಳಿಸುವ ಹುನ್ನಾರ ರಚಿಸಿತು.

### ಕಾರ್ಗಿಲ್ ವಿಜಯ್ ದಿವಸ್ 2022ರ ಮಹತ್ವ

1990ರ ಕಾರ್ಗಿಲ್ ಯುದ್ಧದಲ್ಲಿ ಪಾಕಿಸ್ತಾನದ ವಿರುದ್ಧ ಹೋರಾಟ ಹುತಾತ್ಮರಾದ ಭಾರತೀಯ ಯೋಧರನ್ನು ಗೌರವಿಸುವ ಉದ್ದೇಶದಿಂದ ಕಾರ್ಗಿಲ್ ವಿಜಯ್ ದಿವಸ್ ಅನ್ನು ಆಚರಿಸಲಾಗುತ್ತದೆ. ಭಾರತದಾದ್ಯಂತ ಈ ದಿನವನ್ನು ವಿಶೇಷವಾಗಿ ಸ್ಮರಿಸಿಕೊಳ್ಳಲಾಗುತ್ತದೆ. ನವದೆಹಲಿಯಲ್ಲಿ ಪ್ರಧಾನಮಂತ್ರಿಗಳು ಪ್ರತಿ ವರ್ಷ ಈ ದಿನದಂದು ಇಂಡಿಯಾ ಗೇಟ್ ಬಳಿ ಇರುವ ಅಮರ್ ಜವಾನ್ ಜ್ಯೋತಿಯಲ್ಲಿ ಸೈನಿಕರಿಗೆ ಗೌರವ ಸಲ್ಲಿಸುತ್ತಾರೆ.

### 23ನೇ ಕಾರ್ಗಿಲ್ ವಿಜಯ್ ದಿವಸ್

ಭಾರತದಲ್ಲಿ ಈ ವರ್ಷ ಕಾರ್ಗಿಲ್ ವಿಜಯ್ ದಿವಸ್‌ನ 23ನೇ ವಾರ್ಷಿಕೋತ್ಸವವನ್ನು ಆಚರಿಸಲಾಗುತ್ತಿದೆ. ಭಾರತೀಯ ಸೇನೆಯು ದೆಹಲಿಯಿಂದ ಕಾರ್ಗಿಲ್ ವಿಜಯ್ ದಿವಸ್ ಮೋಟಾರ್ ಬೈಕ್ ಯಾತ್ರೆಗೆ ಚಾಲನೆ ನೀಡುತ್ತದೆ.

ಮಂಗಳವಾರದಂದು ಯುದ್ಧ ಸ್ಮಾರಕದಲ್ಲಿ ಧ್ವಜಾರೋಹಣ ಸಮಾರಂಭಕ್ಕಾಗಿ ವಿಶೇಷ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಈ ವೇಳೆ ಹುತಾತ್ಮ ಯೋಧರ ಕುಟುಂಬಗಳನ್ನು ಆಹ್ವಾನಿಸಲಾಗಿದೆ. ಡ್ರಾಸ್‌ನಲ್ಲಿ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದ್ದು, ನೃತ್ಯ ಪ್ರದರ್ಶನ, ದೇಶಭಕ್ತಿ ಗೀತೆ ಮತ್ತು ವಿವಿಧ ಕಾರ್ಯಕ್ರಮ ಆಯೋಜಿಸಲಾಗಿದೆ.

## ಶಿವಶಂಕರ ಜೊಲ್ಲೆ ಇಂಗ್ಲೀಷ್ ಮೀಡಿಯಂ ಪಬ್ಲಿಕ ಶಾಲೆಯಲ್ಲಿ

# ಕಾರ್ಗಿಲ್ ವಿಜಯ ದಿನಾಚರಣೆ



ಶಿವಶಂಕರ ಜೊಲ್ಲೆ ಇಂಗ್ಲೀಷ್ ಮೀಡಿಯಂ ಪಬ್ಲಿಕ್ ಶಾಲೆಯ ವಿದ್ಯಾರ್ಥಿಗಳು ಕ್ಯಾಂಪಸ್‌ನ ಸಭಾ ಭವನದಲ್ಲಿ ಕಾರ್ಗಿಲ್ ದಿನವನ್ನು ಅತೀ ಸಡಗರದಿಂದ ಆಚರಿಸಿದರು. ಕಾರ್ಯಕ್ರಮದಲ್ಲಿ ಭಾಗವಹಿಸಿದ ಪ್ರಾಚಾರ್ಯರಾದ ಗೀತಾ ನಾಯ್ಡು ಮಾತನಾಡುತ್ತ, "ಕಾರ್ಗಿಲ್ ಯುದ್ಧವು ಭಾರತ ಮತ್ತು ಪಾಕಿಸ್ತಾನದ ಮಧ್ಯೆ ನಡೆದ ಸಶಸ್ತ್ರ ಸಂಘರ್ಷವಾಗಿದೆ. ಈ ದಿನದಂದು ಪಾಕಿಸ್ತಾನದ ವಿರುದ್ಧ ಭಾರತೀಯ ಯೋಧರು ವಿಜಯ ಪತಾಕೆಯನ್ನು ಬಾನಗಲಕ್ಕೆ ಹಾರಿಸಿದರು. ಪಾಕ ಸೈನಿಕರು ಅಕ್ರಮವಾಗಿ ಆಕ್ರಮಿಸಿಕೊಂಡಿದ್ದ ಕಾರ್ಗಿಲ್ ವಿಭಾಗವನ್ನು ಆಪರೇಷನ್ ವಿಜಯ ಎಂಬ ಕಾರ್ಯಾಚರಣೆಯ ಮೂಲಕ ಜುಲೈ 26 ರಂದು ಭಾರತವು ತನ್ನ ವಶಕ್ಕೆ ತೆಗೆದುಕೊಂಡು ಜಗತ್ತಿಗೆ ತನ್ನ ಶಕ್ತಿ, ಸಾಮರ್ಥ್ಯವನ್ನು ಮೆರೆಯಿತು. ಹಲವಾರು ವೀರ ಯೋಧರು ದೇಶಕ್ಕಾಗಿ ತಮ್ಮ ಪ್ರಾಣವನ್ನು ನೀಡಿದರು. ಅವರ ತ್ಯಾಗ ಬಲಿದಾನಗಳಿಗೆ ಗೌರವ ನಮನಗಳನ್ನು ಸಲ್ಲಿಸುವುದು ಈ ದಿನದ ವಿಶೇಷವಾಗಿದೆ. ವಿದ್ಯಾರ್ಥಿಗಳಾದ ತಾವು ಸಹ ದೇಶದ ಬಗ್ಗೆ ವಿಶೇಷ ಅಭಿಮಾನವನ್ನು ಹೊಂದಬೇಕು. ರಾಷ್ಟ್ರದ ಏಳಿಗೆಗಾಗಿ ಎಲ್ಲ ಭೇದಭಾವಗಳನ್ನು ಮರೆತು ಒಗ್ಗೂಡಬೇಕು. ದೇಶದ ಭವ್ಯ ಇತಿಹಾಸದ ಬಗ್ಗೆ ಹೆಮ್ಮೆ ಪಡಬೇಕು. ದೇಶಭಕ್ತರ ಜೀವನ ಸಾಧನೆಗಳನ್ನು ಬಾಳಿನಲ್ಲಿ ಅಳವಡಿಸಿಕೊಳ್ಳಬೇಕೆಂದು" ಕರೆ ನೀಡಿದರು.

ವಿದ್ಯಾರ್ಥಿಗಳು ದೇಶಭಕ್ತಿಗೀತೆ, ನೃತ್ಯ, ಹನಿಗವನಗಳನ್ನು ಹೇಳುವುದರ ಮೂಲಕ ದೇಶಾಭಿಮಾನವನ್ನು ಮೆರೆದರು. ದೇಶಕ್ಕಾಗಿ ಹಗಲಿರುಳೆನ್ನದೆ ತಮ್ಮ ತನು-ಮನವನ್ನು ಸಮರ್ಪಿಸುತ್ತಿರುವ ವೀರಯೋಧರಿಗೆ ಅಂಚೆಯ ಮೂಲಕ ಎಲ್ಲ ವಿದ್ಯಾರ್ಥಿಗಳು ಗ್ರಿಟಿಂಗ್ ಕಾರ್ಡುಗಳನ್ನು ರವಾನಿಸಿದರು. ಅಜಿಂಕ್ಯ ಐದಮಾಳೆ ಸ್ವಾಗತಿಸಿದರು. ರೋಹಿತ ಪಾಟೀಲ ವಂದಿಸಿದರು. ಆದಿರಾಜ ಪಾಟೀಲ ಹಾಗೂ ಸಲೋನಿ ಕಬಾಡೆ ಕಾರ್ಯಕ್ರಮ ನಿರೂಪಿಸಿದರು.

# ವಿಶ್ವ ಪ್ರಕೃತಿ ಸಂರಕ್ಷಣಾ ದಿನ

ಪ್ರಕೃತಿಯ ಸಂರಕ್ಷಣ ಬಹಳ ಅವಶ್ಯಕವಾಗಿದೆ. ಜಾಗತಿಕ ತಾಪಮಾನ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ. ಭೂಮಿಯನ್ನು ಸಂಪನ್ಮೂಲಗಳ ಸಂರಕ್ಷಣೆ ಮಾಡುವುದು ಬಹಳ ಮುಖ್ಯವಾಗಿದೆ. ನೀರು, ಗಾಳಿ, ಮಣ್ಣು, ಸಸ್ಯವರ್ಗ, ಖನಿಜಗಳು, ಪ್ರಾಣಿಗಳು ಹೀಗೆ ಪ್ರಕೃತಿಯ ವಿವಿಧ ಸಂಪನ್ಮೂಲಗಳನ್ನು ಸಂರಕ್ಷಿಸುವ ಮೂಲಕ ಭೂಮಿಯ ನೈಸರ್ಗಿಕ ಸಂಪನ್ಮೂಲಗಳನ್ನು ಕಾಪಾಡಿಕೊಳ್ಳುವುದಾಗಿದೆ.

ದೈನಂದಿನ ಜೀವನಕ್ಕೆ ನೀರು, ಗಾಳಿ, ಮಣ್ಣು, ಖನಿಜಗಳು, ಮರಗಳು, ಪ್ರಾಣಿಗಳು, ಆಹಾರ ಮತ್ತು ಅನಿಲಗಳಂತಹ ನೈಸರ್ಗಿಕ ಸಂಪನ್ಮೂಲಗಳ ಮೇಲೆ ಎಲ್ಲರೂ ಅವಲಂಬಿತರಾಗಿದ್ದಾರೆ. ಇದನ್ನೆಲ್ಲಾ ಪ್ರಕೃತಿ ನಮಗೆ ನಿಸ್ವಾರ್ಥದಿಂದ ಕೊಡುತ್ತಿದೆ. ಆದರೇ ಮನುಷ್ಯ ಅದನ್ನು ಉಳಿಸಿಕೊಳ್ಳದೆ ತನ್ನ ದುರಾಸೆಗೆ ನಾಶ ಮಾಡುತ್ತಿದ್ದಾನೆ. ಸ್ಥಿರ ಸಮಾಜಕ್ಕೆ ಅಡಿಪಾಯ ಹಾಕಲು ಆರೋಗ್ಯಕರ ಪರಿಸರ ಮುಖ್ಯ.

ಪ್ರಸ್ತುತ ಮತ್ತು ಭವಿಷ್ಯದ ಪೀಳಿಗೆಗೆ ಪರಿಸರವನ್ನು ಉಳಿಸುವ ಮತ್ತು ಸಂರಕ್ಷಿಸುವ ಸಲುವಾಗಿ ಪ್ರತಿವರ್ಷ ಜುಲೈ 28 ರಂದು ವಿಶ್ವ ಪರಿಸರ ಸಂರಕ್ಷಣಾ ದಿನವನ್ನು ಆಚರಿಸಲಾಗುತ್ತದೆ. ವಿಶ್ವ ಪ್ರಕೃತಿ ಸಂರಕ್ಷಣಾ ದಿನವನ್ನು ಆಚರಿಸುವ ಮುಖ್ಯ ಉದ್ದೇಶ, ಭೂಮಿಯ ನೈಸರ್ಗಿಕ ಪರಿಸರದಲ್ಲಿ ಅಳಿದುಹೋಗುವ ಅಂಚಿನಲ್ಲಿರುವ ಪ್ರಾಣಿಗಳು ಮತ್ತು ಮರಗಳನ್ನು ಸಂರಕ್ಷಿಸುವುದು.

### ವಿಶ್ವ ಪ್ರಕೃತಿ ಸಂರಕ್ಷಣಾ ದಿನದ ಇತಿಹಾಸ

ವಿಶ್ವ ಪ್ರಕೃತಿ ಸಂರಕ್ಷಣಾ ದಿನದ ಇತಿಹಾಸ ಮತ್ತು ಮೂಲದ ಬಗ್ಗೆ ಸ್ಪಷ್ಟವಾದ ಮಾಹಿತಿಯಿಲ್ಲ. ಆದರೆ ಪ್ರತಿ ವರ್ಷ ಜುಲೈ 28 ರಂದು ವಿಶ್ವ ಪ್ರಕೃತಿ ಸಂರಕ್ಷಣಾ ದಿನವನ್ನು ಆಚರಣೆ ಮಾಡಲಾಗುತ್ತದೆ. ಈ ದಿನದ ಆಚರಣೆಯ ಮುಖ್ಯ ಉದ್ದೇಶ ಜನರು ಪ್ರಕೃತಿಯನ್ನು ಹೇಗೆ ಬಳಸಿಕೊಳ್ಳುತ್ತಿದ್ದಾರೆ ಎಂಬುದರ ಬಗ್ಗೆ ಆತ್ಮಾವಲೋಕನ ಮಾಡುವುದು. ಮತ್ತು ಅದನ್ನು ಸಂರಕ್ಷಿಸಲು ಕ್ರಮಗಳನ್ನು ತೆಗೆದುಕೊಳ್ಳುವುದಾಗಿದೆ. ನೈಸರ್ಗಿಕ ಸಂಪನ್ಮೂಲಗಳ ಅತಿಯಾದ ದುರುಪಯೋಗದಿಂದಾಗಿ ಜಾಗತಿಕ ತಾಪಮಾನ ಏರಿಕೆ, ವಿವಿಧ ಸಾಂಕ್ರಾಮಿಕ ರೋಗಗಳು, ಪ್ರಕೃತಿ ವಿಕೋಪಗಳು ಸೇರಿದಂತೆ ಇತ್ಯಾದಿ ಸಮಸ್ಯೆಗಳನ್ನು ಎದುರಿಸುವಂತಾಗಿದೆ. ಹೀಗಾಗಿ ಪ್ರಸ್ತುತ ಅದನ್ನು ತಡೆಯುವುದು ಅನಿವಾರ್ಯವಾಗಿದ್ದು, ಅದನ್ನು ಪ್ರತಿಯೊಬ್ಬರಿಗು ಮನವರಿಕೆ ಮಾಡಿಕೊಡುವುದು ಈ ದಿನದ ಮುಖ್ಯ ಉದ್ದೇಶವಾಗಿದೆ.

### ವಿಶ್ವ ಪ್ರಕೃತಿ ಸಂರಕ್ಷಣಾ ದಿನದ ಉದ್ದೇಶ


ವಿಶ್ವ ಪ್ರಕೃತಿ ಸಂರಕ್ಷಣಾ ದಿನವನ್ನು ಆಚರಣೆ ಮಾಡುವ ಮೂಲ ಉದ್ದೇಶ, ಭೂಮಿಯ ನೈಸರ್ಗಿಕ ಪರಿಸರದಲ್ಲಿ ಅಳಿದುಹೋಗುತ್ತಿರುವ ಅಥವಾ ಅಂಚಿನಲ್ಲಿರುವ ಪ್ರಾಣಿಗಳು, ಪಕ್ಷಿಗಳು ಮತ್ತು ಮರಗಳನ್ನು ಸಂರಕ್ಷಿಸುವುದು.

### ವಿಶ್ವ ಪ್ರಕೃತಿ ಸಂರಕ್ಷಣಾ ದಿನದ ಮಹತ್ವ

ಮನುಷ್ಯ ಮತ್ತು ಪ್ರಕೃತಿಯ ನಡುವಿನ ಸಂಪರ್ಕವನ್ನು ಮರಿಯಬಾರದು ಎಂಬುವುದು ಪ್ರಕೃತಿಯ ಸಂರಕ್ಷಣೆಯ ಮೊದಲ ಷರತ್ತಾಗಿದೆ ಎಂದು ರಷ್ಯಾದ ಖ್ಯಾತ ಬರಹಗಾರ ಲಿಯೋ ಟಾಲ್ ಸ್ಟಾಯ್ ಹೇಳಿದ್ದಾರೆ.

ಆರೋಗ್ಯಕರ ಪರಿಸರವು ಸ್ಥಿರ ಮತ್ತು ಉತ್ತಮ ಸಮಾಜಕ್ಕೆ ಅಡಿಪಾಯವಾಗಿದೆ. ಪ್ರಸ್ತುತ ಹಾಗೂ ಭವಿಷ್ಯದ ಪೀಳಿಗೆಯ ಯೋಗಕ್ಷೇಮವನ್ನು ಕಾಪಾಡಿಕೊಳ್ಳಲು ವಿಶ್ವ ಪ್ರಕೃತಿ ಸಂರಕ್ಷಣಾ ದಿನವು ಮಹತ್ವದ ಪಾತ್ರ ವಹಿಸುತ್ತದೆ.

## ಶ್ರೀ ಜ್ಯೋತಿ ವಿವಿಧ ಉದ್ದೇಶಗಳ ಸೌಹಾರ್ದ ಸಹಕಾರಿ ನಿ., ಯಕ್ಸಂಬಾ






**ನೂತನ ಶಾಖೆಯ ಉದ್ಘಾಟನೆ**

ಹುಕ್ಕೇರಿ ತಾಲೂಕಿನ ದಡ್ಡಿ ಗ್ರಾಮದಲ್ಲಿ ಜೊಲ್ಲೆ ಉದ್ಯೋಗ ಸಮೂಹದ ಅಂಗಸಂಸ್ಥೆಯಾದ ಶ್ರೀ. ಜ್ಯೋತಿ ವಿವಿಧ ಉದ್ದೇಶಗಳ ಸೌಹಾರ್ದ ಸಹಕಾರಿ ನಿ., ಯಕ್ಸಂಬಾ. ಶಾಖೆ ದಡ್ಡಿ ನೂತನ ಶಾಖೆಯ ಉದ್ಘಾಟನೆಯನ್ನು ಸಿದ್ಧೇಶ್ವರ ಸುಕ್ಷೇತ್ರ ಕಾರಿಮಠ ಹತ್ತರಗಿಯ ಶ್ರೀ ಮ.ನಿ.ಪ್ರ. ಗುರುಸಿದ್ದೇಶ್ವರ ಮಹಾಸ್ವಾಮಿಗಳ ದಿವ್ಯ ಸಾನಿಧ್ಯದಲ್ಲಿ ಆಶಾಜ್ಯೋತಿ ವಿಶೇಷ ಮಕ್ಕಳ ಶಾಲೆಯ ಅಧ್ಯಕ್ಷರಾದ ಶ್ರೀ. ಜ್ಯೋತಿಪ್ರಸಾದ ಜೊಲ್ಲೆ ಹಾಗೂ ಬಸವಜ್ಯೋತಿ ಯುಥ್ ಫೌಂಡೇಶನ್ ಅಧ್ಯಕ್ಷರಾದ ಕು. ಬಸವಪ್ರಸಾದ ಜೊಲ್ಲೆಯವರು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿದರು.




**ಉದ್ಘಾಟನೆ**

ಭೋಜ ಗ್ರಾಮದಲ್ಲಿ ಆಯೋಜಿಸಲಾಗಿದ್ದ "ಉಜ್ವಲ ಭಾರತ–ಉಜ್ವಲ ಭವಿಷ್ಯ ಇಂಧನ @2047" ವಿದ್ಯುತ್ ಮಹೋತ್ಸವ ಸಮಾರಂಭವನ್ನು ಚಿಕ್ಕೋಡಿ ಲೋಕಸಬೆ ಸಂಸದರಾದ ಶ್ರೀ ಅಣ್ಣಾಸಾಹೇಬ ಜೊಲ್ಲೆ ದೀಪ ಬೆಳಗಿಸುವುದರ ಮೂಲಕ ಉದ್ಘಾಟಿಸುತ್ತಿರುವುದು.



**ಉಚಿತ ಗ್ಯಾಸ್ ಸಿಲಿಂಡರ್ ವಿತರಣೆ**

ಚಿಕ್ಕೋಡಿ ಲೋಕಸಭಾ ವ್ಯಾಪ್ತಿಯ ನಣದಿ ಮತ್ತು ನಾಗರಾಳ ಗ್ರಾಮದಲ್ಲಿ, ಉಜ್ವಲಾ ಯೋಜನೆಯ 91 ಫಲಾನುಭವಿಗಳಿಗೆ ಬಸವಜ್ಯೋತಿ ಯುಥ್ ಫೌಂಡೇಶನ್ ಅಧ್ಯಕ್ಷರಾದ ಕು. ಬಸವಪ್ರಸಾದ ಜೊಲ್ಲೆಯುವರು ಉಚಿತ ಗ್ಯಾಸ್ ಸಿಲಿಂಡರ್‌ಗಳನ್ನು ವಿತರಿಸುತ್ತಿರುವ ದೃಶ್ಯ.




**ಅಭಿನಂದನೆ ಸಲ್ಲಿಸುತ್ತಿರುವುದು**

ನವದೆಹಲಿಯಲ್ಲಿ, ನೂತನ ಗೌರವಾನ್ವಿತ ರಾಷ್ಟ್ರಪತಿಗಳಾದ ಶ್ರೀಮತಿ ದ್ರೌಪದಿ ಮುರ್ಮು ಅವರನ್ನು ಜೊಲ್ಲೆ ದಂಪತಿ ಭೇಟಿಯಾಗಿ ಹೂಗುಚ್ಛ ನೀಡಿ ಅಭಿನಂದನೆ ಸಲ್ಲಿಸುತ್ತಿರುವ ದೃಶ.




**ಉದ್ಘಾಟಿಸುತ್ತಿರುವುದು**

ಗೃಹ ಇಲಾಖೆ ಹಾಗೂ ರಾಜ್ಯ ಪೊಲೀಸ್ ವಸತಿ ವತಿಯಿಂದ 2 ಕೋಟಿ 70 ಲಕ್ಷ ರೂ. ವೆಚ್ಚದಲ್ಲಿ ನಿರ್ಮಿಸಲಾದ ನೂತನ ಗ್ರಾಮೀಣ ಮತ್ತು ನಗರ ಪೊಲೀಸ್ ಠಾಣೆಯನ್ನು ಗೃಹ ಸಚಿವರಾದ ಶ್ರೀ ಆರಗ ಜ್ಞಾನೇಂದ್ರ ಅವರ ಜೊತೆಗೂಡಿ ಜೊಲ್ಲೆ ದಂಪತಿ ಉದ್ಘಾಟಿಸುತ್ತಿರುವ ದೃಶ್ಯ.



**ಉಚಿತ ಅಂಬ್ಯುಲೆನ್ಸ್ ಸೇವೆ**

ಬೆಳಗಾವಿಯ ಸುವರ್ಣ ವಿಧಾನಸೌಧದ ಆವರಣದಲ್ಲಿ, ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯಿಂದ ಚಿಕ್ಕೋಡಿ ಲೋಕಸಭಾ ವ್ಯಾಪ್ತಿಯ 9 ಸಮುದಾಯ ಆರೋಗ್ಯ ಕೇಂದ್ರಗಳು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಚಿಕ್ಕೋಡಿ ಲೋಕಸಭೆ ಸಂಸದರಾದ ಶ್ರೀ. ಅಣ್ಣಾಸಾಹೇಬ ಜೊಲ್ಲೆಯವರು ಆಂಬ್ಯುಲೆನ್ಸ್‌ಗಳನ್ನು ಹಸ್ತಾಂತರಿಸುತ್ತಿರುವ ದೃಶ್ಯ.



**ಚಾಲನೆ ನೀಡುತ್ತಿರುವುದು**

ಮುಖ್ಯಮಂತ್ರಿಗಳಾದ ಶ್ರೀ ಬಸವರಾಜ ಬೊಮ್ಮಾಯಿಯವರೊಂದಿಗೆ ಮುಜರಾಯಿ, ಹಜ ಮತ್ತು ವಕ್ಫ್ ಇಲಾಖೆಯ ಸಚಿವರಾದ ಸೌ. ಶಶಿಕಲಾ ಜೊಲ್ಲೆ ಯವರು ಅಂಜನಾದ್ರಿ ಬೆಟ್ಟಕ್ಕೆ ತೆರಳಿ, ಆಂಜನೇಯ ಸ್ವಾಮಿಗೆ ವಿಶೇಷ ಪೂಜೆ ಸಲ್ಲಿಸಿ, ಕ್ಷೇತ್ರದ ಅಭಿವೃದ್ಧಿಗೆ ಚಾಲನೆ ನೀಡಿದ ದೃಶ್ಯ.



**ಸನ್ಮಾನಿಸುತ್ತಿರುವುದು**

ಜೊಲ್ಲೆ ಎಜ್ಯುಕೇಶನ್ ಸೊಸೈಟಿಯ ಬಸವಜ್ಯೋತಿ ಪದವಿ ಪೂರ್ವ ಕಾಲೇಜಿನ ಕಲಾ, ವಾಣಿಜ್ಯ ಮತ್ತು ವಿಜ್ಞಾನ ವಿಭಾಗದಲ್ಲಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಬಸವಜ್ಯೋತಿ ಯೂಥ್ ಫೌಂಡೇಶನ ಅಧ್ಯಕ್ಷರಾದ ಕು. ಬಸವಪ್ರಸಾದ ಜೊಲ್ಲೆ ಯವರು ಪ್ರಶಸ್ತಿ ನೀಡಿ ಸನ್ಮಾನಿಸುತ್ತಿರುವ ದೃಶ್ಯ.



**ಆದೇಶ ಪತ್ರಗಳ ವಿತರಣೆ**

2020–21 ರಲ್ಲಿ ಅತಿವೃಷ್ಟಿಯಿಂದಾಗಿ ಹಾನಿಗೊಳಗಾಗಿದ್ದ ಮನೆಗಳ ಪುನರ್ವಸತಿ ನಿರ್ಮಾಣಕ್ಕಾಗಿ ಫಲಾನುಭವಿಗಳಿಗೆ ಆದೇಶ ಪ್ರತಿಗಳನ್ನು ಚಿಕ್ಕೋಡಿ ಲೋಕಸಭಾ ಸಂಸದರಾದ ಶ್ರೀ ಅಣ್ಣಾಸಾಹೇಬ ಜೊಲ್ಲೆ ಹಸ್ತಾಂತರಿಸುತ್ತಿರುವ ದೃಶ್ಯ.



**ಆದೇಶ ಪತ್ರ ವಿತರಣೆ**

ದಡ್ಡಿಗುಡಗನಟ್ಟಿ ಗ್ರಾಮದ ಶ್ರೀ ಬ್ರಹ್ಮದೇವರ ದೇವಸ್ಥಾನಕ್ಕೆ, ಧಾರ್ಮಿಕ ದತ್ತಿ ಇಲಾಖೆ ವತಿಯಿಂದ ಮಂಜೂರಾದ 15 ಲಕ್ಷ ರೂಪಾಯಿ ಮೊತ್ತದ ಆದೇಶ ಪತ್ರವನ್ನು ಬಸವಜ್ಯೋತಿ ಯೂಥ್ ಫೌಂಡೇಶನ ಅಧ್ಯಕ್ಷರಾದ ಕು. ಬಸವಪ್ರಸಾದ ಜೊಲ್ಲೆ ಯವರು ವಿತರಿಸುತ್ತಿರುವ ದೃಶ್ಯ.



**ಚೆಕ್ ವಿತರಣೆ**

ಬೇಡಕಿಹಾಳ ಗ್ರಾಮದಲ್ಲಿ, 75ನೇ ಸ್ವಾತಂತ್ರ್ಯದ ಅಮೃತ ಮಹೋತ್ಸವದ ಅಂಗವಾಗಿ 17 ಮಹಿಳಾ ಸ್ವಸಹಾಯ ಸಂಘಗಳಿಗೆ ತಲಾ 1 ಲಕ್ಷ ರೂ. ಯಂತೆ 17 ಲಕ್ಷ ರೂ. ಮೊತ್ತದ ಚೆಕ್‌ಗಳನ್ನು ಮುಜರಾಯಿ, ಹಜ ಮತ್ತು ವಕ್ಫ್ ಇಲಾಖೆಯ ಸಚಿವರಾದ ಸೌ. ಶಶಿಕಲಾ ಜೊಲ್ಲೆ ಯವರು ವಿತರಣೆ ಮಾಡುತ್ತಿರುವುದು.

ಜೊಲ್ಲೆ ಉದ್ಯೋಗ ಸಮೂಹ ರಾಣಿ ಚನ್ನಮ್ಮಾ ವೃತ್ತ, ಯಕ್ಸಂಬಾ ತಾ. ಚಿಕ್ಕೋಡಿ ಜಿ. ಬೆಳಗಾವಿ– 591244 Ph : 9844469288 / 7760983792 E-mail : darpanjus6@gmail.com

ಪ್ರಧಾನ ಸಂಪಾದಕರು :– ಸೌ. ಸುಧಾ ಡಿ. ಪಾಟೀಲ, ಉಪನ್ಯಾಸಕರು, ಕನ್ನಡ ವಿಭಾಗ